ಶಿ-72 (91)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ನಸೀರ್ ಅಹಮದ್ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ಸರ್ಕಾರವು ಈಗಾಗಲೇ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಧ್ಯಾಪಕರ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಿದ್ದು, ಉಲ್ಲೇಖಿತ ಸಂಖ್ಯೆ- 1 ಮತ್ತು 2 ರಲ್ಲಿ ಕರ್ನಾಟಕ ಸರ್ಕಾರದ ಆದೇಶದಂತೆ ದಿನಾಂಕ:30-12-2015 ರವರೆಗೆ ಮರಣ/ನಿವೃತ್ತಿ/ವರ್ಗಾವಣೆ ಹಾಗೂ ಇನ್ನಿತರೆ ಕಾರಣಗಳಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ನೀಡಲಾಗಿತ್ತು. ಆದರೆ ಆರ್ಥಿಕ ಸಂಕಷ್ಟದ ಕಾರಣ ನೀಡಿ ಅನುದಾನಿತ ಪದವಿ ಕಾಲೇಜುಗಳಲ್ಲಿ ನೇಮಕಾತಿಯನ್ನು ತಡೆಹಿಡಿಯಲಾಗಿದ್ದು, ಇದರಿಂದಾಗಿ ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಬಡ ಉಪನ್ಯಾಸಕರ ಭವಿಷ್ಯ ಅತಂತ್ರದಲ್ಲಿದೆ. ಇದರಲ್ಲಿ ಬಹಳಷ್ಟು ಉಪನ್ಯಾಸಕರು ಒಂದೆರಡು ತಿಂಗಳಲ್ಲಿ ವಯೋಮಿತಿ ಮೀರುತ್ತಿರುವುದರಿಂದ ಅವರು ಆತಂಕದಲ್ಲಿದ್ದಾರೆ. ಕೋವಿಡ್-19 ರಿಂದಾಗಿ ಯಾವುದೇ ಪ್ರಕ್ರಿಯೆ ನಡೆದಿರುವುದಿಲ್ಲ. ಹೀಗಾಗಿ ವಯೋಮಿತಿ ಮೀರುತ್ತಿರುವ ಉಪನ್ಯಾಸಕರಿಗೆ ಒಂದು ವರ್ಷ ವಯೋ ವ್ಯರ್ಥವಾಗಿದ್ದರಿಂದ ಒಂದು ವರ್ಷ ವಯೋಮಿತಿ ಸಡಿಲಿಸಬೇಕಾಗಿರುತ್ತದೆ. ಈಗಾಗಲೇ ಸರ್ಕಾರದಿಂದ ಹುದ್ದೆಗಳ ಅನುಮೋದನೆ ಪಡೆದಿರುವ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ನಡೆಸುವ ಕುರಿತು.

**ಉತ್ತರ**

ಸರ್ಕಾರದ ಪತ್ರ ಸಂಖ್ಯೆ:ಇಡಿ 240 ಯುಪಿಸಿ 2014 ದಿನಾಂಕ: 01.09.2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ: 31.12.2015 ರೊಳಗೆ ನಿವೃತ್ತಿ,ಮರಣ,ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದ್ದು, ಅದರಂತೆ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿತ್ತು.

ಪ್ರಸ್ತುತ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ ಆಇ 157/ವೆಚ್ಚ-8/2020 ದಿನಾಂಕ: 10.06.2020 ಮತ್ತು ಆಇ/ಬಿಇಎಂ/2020 ದಿನಾಂಕ: 06.07.2020 ಅನ್ನು ಹೊರಡಿಸಿ "ಕೋವಿಡ್-19 ರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವುದರಿಂದ, ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು 2020-21 ನೇ ಸಾಲಿನಲ್ಲಿ ಭರ್ತಿ ಹಾಗೂ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊಸದಾಗಿ ಸಹಮತಿ ನೀಡುವಂತಿಲ್ಲವೆಂದು ಮತ್ತು ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲ ಎಂದು ಸೂಚಿಸಲಾಗಿದೆ. ಮುಂದುವರೆದು, ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್ ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ಈಗಾಗಲೇ ಆರ್ಥಿಕ ಇಲಾಖೆಯ ಸಹಮತಿ ಪಡೆದು ನೇಮಕಾತಿಯ ವಿವಿಧ ಹಂತಗಳಲ್ಲಿರುವ ಹುದ್ದೆಗಳಿಗೂ ಸಹ ಈ ಆದೇಶ ಅನ್ವಯವಾಗುತ್ತದೆ ಎಂದು ಸೂಚಿಸುತ್ತದೆ. ಆದ್ದರಿಂದ ಮುಂದಿನ ಆದೇಶದವರೆಗೆ ನೇಮಕಾತಿ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದಂತೆ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇವರಿಗೆ ನಿರ್ದೇಶಿಸಲಾಗಿದೆ.

ಪ್ರಸ್ತುತ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 459 ವೆಚ್ಚ-8/2021 ದಿನಾಂಕ:23.02.2021 ರನ್ವಯ ಕಾಲೇಜು ಶಿಕ್ಷಣ ವ್ಯಾಪ್ತಿಯಲ್ಲಿನ ಖಾಸಗಿ ಅನುದಾನಿತ ಪದವಿ ಶಿಕ್ಷಣ ಸಂಸ್ಥೆಗಳಲ್ಲಿ ದಿನಾಂಕ: 31.12.2015 ರ ಅಂತ್ಯಕ್ಕೆ ನಿವೃತ್ತಿ, ಮರಣ, ರಾಜೀನಾಮೆ ಇತರೆ ಕಾರಣಗಳಿಂದ ಖಾಲಿ ಉಂಟಾಗಿರುವ ಹುದ್ದೆಗಳ ಪೈಕಿ ಈಗಾಗಲೇ ಸರ್ಕಾರದಿಂದ ಅನುಮೋದನೆಗೊಂಡು ನೇಮಕಾತಿ ಪ್ರಕ್ರಿಯೆಯು ಇಲಾಖೆಯ ಹಂತದಲ್ಲಿ

ಬಾಕಿ ಇರುವ 340 ಬೋಧಕ ಹುದ್ದೆಗಳ ನೇಮಕಾತಿ ಆದೇಶವನ್ನು 2021-22 ನೇ ಶೈಕ್ಷಣಿಕ ವರ್ಷ ಪ್ರಾರಂಭಗೊಂಡ ನಂತರ (ಜೂನ್-ಜುಲೈ) ನೀಡಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಈ ಹಿನ್ನೆಲೆಯಲ್ಲಿ ಪ್ರಸ್ತುತ ಇಲಾಖಾ ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ಈಗಾಗಲೇ ಸರ್ಕಾರದಿಂದ ಅನುಮೋದನೆಗೊಂಡು ನೇಮಕಾತಿ ಪ್ರಕ್ರಿಯೆಯು ಇಲಾಖೆಯ ಹಂತದಲ್ಲಿ ಬಾಕಿ ಇರುವ 340 ಬೋಧಕ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ನಡೆಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಮುಂದುವರೆದು, ವಯೋಮಿತಿ ಮೀರುತ್ತಿರುವ ಉಪನ್ಯಾಸಕರಿಗೆ ಒಂದು ವರ್ಷ ವಯೋಮಿತಿ ಸಡಿಲಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಇಡಿ 31 ಯುಪಿಸಿ 2021

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)